ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಇರುವ ಯೋಜನೆಗಳ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

592 (827) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು; ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳು ಯಾವುವು; (ವಿವರ ನೀಡುವುದು)

(ಆ) ಈ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯ ವಿವಿಧ ಇಲಾಖೆಗಳಿಗೆ ಬಿಡುಗಡೆ ಮಾಡಿದ ಹಾಗೂ ಖರ್ಚಾಗಿರುವ ಅನುದಾನ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಗಳ ಸದುಪಯೋಗ ಪಡೆದುಕೊಂಡ ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು ?